# ನೂತನ ರಾಷ್ಟ್ರೀಯ ಶಿಕ್ಷಣ ನೀತಿಯಿಂದ ಹಲವು ಸಮಸ್ಯೆ

## ಅಭಿನಂದನಾ ಸಮಾರಂಭದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಆತಂಕ

KP



ಮುಂಡಗೋಡದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಸನ್ಮಾನಿಸಲಾಯಿತು.

• **ಕನ್ನಡಪ್ರಭ ವಾರ್ತೆ** ಮುಂಡಗೋಡ

ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಕುರಿತು ಶಿಕ್ಷಣ ಇಲಾಖೆ, ಶಿಕ್ಷಕರು, ವಿದ್ಯಾರ್ಥಿಗಳು, ಪಾಲಕರು ಸೇರಿದಂತೆ ಯಾರಿಗೂ ಸ್ಪಷ್ಟ ಮಾಹಿತಿ ಇಲ್ಲ. ಹೀಗಾಗಿ ಸಾಕಷ್ಟು ಸಮಸ್ಯೆಗಳು ಉದ್ಭವವಾಗಿವೆ ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಆತಂಕ ವ್ಯಕ್ತಪಡಿಸಿದರು.

ಮಂಗಳವಾರ ನಗರಸಭಾ ಭವನದಲ್ಲಿ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ ಹಾಗೂ ಕರ್ನಾಟಕ ರಾಜ್ಯ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ ಮುಂಡಗೋಡ ಘಟಕದ ಆಶ್ರಯದಲ್ಲಿ ಅಭಿನಂದನಾ ಸಮಾರಂಭ ಮತ್ತು ಶೈಕ್ಷಣಿಕ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿ, ಇಂದಿನ ಶಿಕ್ಷಣದಲ್ಲಿ ಸಂಸ್ಕಾರದ ಕೊರತೆ ಇದೆ. ತಂದೆ- ತಾಯಿಗಳು ಪಡುವ ಕಷ್ಟವನ್ನು ತಿಳಿದರೆ ಮಾತ್ರ ಸಮಾಜ ಹಾಗೂ ಜೀವನ ಎಂದರೇನು ಎಂಬ ಅರಿವು ಮಕ್ಕಳಲ್ಲಿ ಬರುತ್ತದೆ. ಮಕ್ಕಳನ್ನು ವಸತಿ ಶಾಲೆಗಳಲ್ಲಿಟ್ಟು ಶಿಕ್ಷಣ ನೀಡುವ ಪದ್ಧತಿಯಿಂದ ಮಕ್ಕಳಲ್ಲಿ ಸಂಸ್ಕಾರದ ಕೊರತೆಯಾಗಲು ಕಾರಣವಾಗಿದೆ ಎಂದರು.

ಅತ್ತಿವೇರಿ ಬಸವಧಾಮದ ಮಾತೆ ಬಸವೇಶ್ವರಿ ಸಾನ್ನಿಧ್ಯ ವಹಿಸಿ ಮಾತನಾಡಿ, ಶಿಕ್ಷಕರು ಹಾಗೂ ಬಸವರಾಜ ಹೊರಟ್ಟಿ ಅವರ ನಡುವೆ ಅವಿನಾಭಾವ ಸಂಬಂಧವಿದೆ. ಶಿಕ್ಷಕರ ಸಂಘಟನೆಯಲ್ಲಿ ಶಕ್ತಿ ಇದೆ ಎಂಬುದನ್ನು ಬಸವರಾಜ ಹೊರಟ್ಟಿಯವರು ತೋರಿಸಿಕೊಟ್ಟಿದ್ದಾರೆ. 7 ಬಾರಿ ಶಿಕ್ಷಕರ ಕ್ಷೇತ್ರದಿಂದ ಸ್ಪರ್ಧಿಸಿ ಗೆಲುವು ಸಾಧಿಸುವುದು ದಾಖಲೆಯೇ ಸರಿ. ದಕ್ಷ, ಚಿಂತಕ ಹಾಗೂ ಯಾವುದೇ ಕಪ್ಪುಚುಕ್ಕೆ ಇಲ್ಲದ ಬಸವರಾಜ ಹೊರಟ್ಟಿ ಅವರ ಬಗ್ಗೆ ಶಿಕ್ಷಕರಿಗೂ ಪ್ರೀತಿ, ಗೌರವವಿದೆ. 45 ವರ್ಷ ಹೋರಾಟದ ಮೂಲಕ ಗುರುತಿಸಿಕೊಂಡಿದ್ದಾರೆ ಎಂದು ಶ್ಲಾಘಿಸಿದರು.

ಧಾರವಾಡ ಶಿಕ್ಷಣ ತಜ್ಞ ಸುರೇಶ ಕುಲಕರ್ಣಿ ರಾಷ್ಟ್ರೀಯ ಶಿಕ್ಷಣ ನೀತಿಯ ಸಾಧಕ- ಬಾಧಕಗಳ ಬಗ್ಗೆ ಉಪನ್ಯಾಸ ನೀಡಿದರು. ಶಿರಸಿ ಶೈಕ್ಷಣಿಕ ಜಿಲ್ಲೆ ಉಪನಿರ್ದೇಶಕ ದಿವಾಕರ ಶೆಟ್ಟಿ, ತಹಸೀಲ್ದಾರ್ ಶ್ರೀಧರ ಮುಂದಲಮನಿ, ಲೋಯೋಲಾ ಶಾಲೆ ಪ್ರಾಧ್ಯಾಪಕ ಜಾನ್ಸನ್ ಪಿಂಟೊ, ವಿ.ವಿ. ನಡುವಿನಮನಿ ಮಾತನಾಡಿದರು. ವಿನಾಯಕ ಶೇಟ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಡಿ. ಮುಡೆಣ್ಣವರ ಸ್ವಾಗತಿಸಿದರು. ಸುರೇಶ ಪೂಜಾರ, ರಮೇಶ ಅಂಬಿಗೇರ ನಿರೂಪಿಸಿದರು.

## ಸಣ್ ಸುದ್ದಿ

# ವಿಧಾನ ಪರಿಷತ್ ಸಭಾಪತಿ ಹೊರಟ್ಟಿ ಪ್ರವಾಸ

**ಹಾವೇರಿ:** ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಸೆ. 1ರಂದು ಜಿಲ್ಲಾಡಳಿತದಿಂದ ಶಿಗ್ಗಾಂವಿ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯಲ್ಲಿ ಕೈಗೊಂಡಿರುವ ವಿವಿಧ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಕಟ್ಟಡ ಉದ್ಘಾಟನಾ ಕಾರ್ಯಗಳಲ್ಲಿ ಮುಖ್ಯಮಂತ್ರಿಗಳೊಂದಿಗೆ ಭಾಗವಹಿಸಲಿದ್ದಾರೆ. ನಂತರ ಹುಬ್ಬಳ್ಳಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

Kannada Prabha 01.09.2021